8. ಪ್ರಕಟಣೆ :

ವಿಷಯ : ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶ.

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು 2009ನೇ ಸಾಲಿನ ಈ ಕೆಳಕಂಡ ವಿಧೇಯಕಗಳನ್ನು ಈ ದಿನ . ದಿನಾಂಕ: 29–07–2009ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿ ದೆಯೆಂದು ತಿಳಿಸಿರುತ್ತಾರೆ.

1) ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ಎರಡನೇ ತಿದ್ದುಪಡಿ) ವಿಧೇಯಕ 2009
2) ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕ 2009
3) ಕರ್ನಾಟಕ ಪೌರಸಭೆಗಳ ಕಾನೂನು ಹಾಗೂ ಇನ್ನೊಂದು ಕಾನೂನಿನ (ತಿದ್ದುಪಡಿ) ವಿಧೇಯಕ 2009

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು 2009ನೇ ಸಾಲಿನ ಈ ಕೆಳಕಂಡ ವಿಧೇಯಕಗಳನ್ನು ಈ ದಿನ ದಿನಾಂಕ: 29–07–2009ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿ ದೆಯೆಂದು ತಿಳಿಸಿರುತ್ತಾರೆ.

1) ಭಾರತ ದಂಡ ಸಂಹಿತೆ ಮತ್ತು ದಂಡ ಪ್ರಕ್ರಿಯಾ (ಕರ್ನಾಟಕ ತಿದ್ದುಪಡಿ) ವಿಧೇಯಕ 2009
2) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ 2009
3) ಕರ್ನಾಟಕ ಕಳ್ಳಭಟ್ಟಿ ವ್ಯಾಪಾರಿಗಳ, ಮಾದಕ ವಸ್ತು ಅಪರಾಧಿಗಳ, ಜೂಜುಕೋರರ, ಗೂಂಡಾಗಳ, ಅನೈತಿಕ ವ್ಯವಹಾರ ಅಪರಾಧಿಗಳ ಮತ್ತು ಕೊಳಚೆ ಪ್ರದೇಶಗಳನ್ನು ಕಬಳಿಸುವವರ ಅಪಾಯಕಾರಿ ಚಟುವಟಿಕೆಗಳನ್ನು ತಡೆಗಟ್ಟುವ (ತಿದ್ದುಪಡಿ) ವಿಧೇಯಕ 2009

4) ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ 2009
5) ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ 2009
6) ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗಗಳ (ತಿದ್ದುಪಡಿ) ವಿಧೇಯಕ 2009

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು 2009ನೇ ಸಾಲಿನ ಈ ಕೆಳಕಂಡ ವಿಧೇಯಕಗಳನ್ನು ಈ ದಿನ ದಿನಾಂಕ: 29-07-2009ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿದೆಯೆಂದು ತಿಳಿಸಿರುತ್ತಾರೆ.

1) ಕರ್ನಾಟಕ ಧನವಿನಿಯೋಗ (ಸಂಖ್ಯೆ:2) ವಿಧೇಯಕ 2009
2) ಕರ್ನಾಟಕ ಧನವಿನಿಯೋಗ (ಸಂಖ್ಯೆ:3) ವಿಧೇಯಕ 2009
3) ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ 2009
4) ಕರ್ನಾಟಕ ವ್ಯವಸ್ಥಿತ ಅಪರಾಧಗಳು (ತಿದ್ದುಪಡಿ) ವಿಧೇಯಕ 2009

9. ಶಾಸನ ರಚನೆ :

1) ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕ, 2009

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಸಚಿವರು) ಮಾನ್ಯ ಅಧ್ಯಕ್ಷರೆ, **"2009ರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕವನ್ನು" ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.**

ಪ್ರಸ್ತಾವವನ್ನು ಮಂಡಿಸಲಾಯಿತು